ಇ) ಮಂಗಳೂರು ಮತ್ತು ಮಲ್ಪೆ ನಡುವೆ ಸೂಕ್ತ ಬಂದರು ಇಲ್ಲದಿರುವುದರಿಂದ ಹೆಜಮಾಡಿಯಲ್ಲಿ ಆರ್ಥಿಕ ಮತ್ತು ತಾಂತ್ರಿಕವಾಗಿ ಲಾಭದಾಯಕವಾಗುವಂತಿದ್ದಲ್ಲಿ ಮಾತ್ರ ರೂ.45.00 ಕೋಟಿ ವೆಚ್ಚದಲ್ಲಿ 2ನೇ ಹಂತದ ಅಭಿವೃದ್ಧಿ ಯೋಜನೆ ಕೈಗೊಳ್ಳಲು ಕೇಂದ್ರ ಸರ್ಕಾರಕ್ಕೆ ಸೂಕ್ತ ಅನುದಾನಕ್ಕಾಗಿ ಪ್ರಸ್ತಾವನೆ ಸಲ್ಲಿಸಲಾಗುವುದು.

ಸಮುದ್ರದ ಕೊರೆತಕ್ಕೆ ಹಣ ಮಂಜೂರಾದ

1011 (625) ಶ್ರೀ ಲಾಲಾಜಿ ಆರ್. ಮೆಂಡನ್ (ಕಾಪು) : ಮಾನ್ಯ ಜೀವಿಶಾಸ್ತ್ರ, ಪರಿಸರ, ಬಂದರು ಮತ್ತು ಒಳನಾಡು ಜಲಸಾರಿಗೆ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಉಡುಪಿ ಜಿಲ್ಲೆಯಲ್ಲಿನ ಸಮುದ್ರ ಕೊರೆತಕ್ಕೆ ಮಂಜೂರು ಮಾಡಿದ ಹಣವೆಷ್ಟು?

ಆ) ಇದರಲ್ಲಿ ಕಾಪು ಕ್ಷೇತ್ರಕ್ಕೆ ಬಳಸಲಾದ ಹಣ ಎಷ್ಟು?

ಇ) ಕೇಂದ್ರದಿಂದ ರಾಜ್ಯಕ್ಕೆ ಕಡಲು ಕೊರೆತದ ಸಲುವಾಗಿ ಮಂಜೂರಾದ ಹಣವೆಷ್ಟು?

ಶ್ರೀ ಜೆ. ಕೃಷ್ಣ ಪಾಲೇಮಾರ್ (ಜೀವಿಶಾಸ್ತ್ರ, ಪರಿಸರ, ಬಂದರು ಮತ್ತು ಒಳನಾಡು ಜಲಸಾರಿಗೆ ಸಚಿವರು) :

ಅ) ಉಡುಪಿ ಜಿಲ್ಲೆಯಲ್ಲಿನ ಸಮುದ್ರ ಕೊರೆತಕ್ಕೆ 2009–10ನೇ ಸಾಲಿನ ಆಯವ್ಯಯದಲ್ಲಿ ಲೆಕ್ಕಶಿರ್ಷಿಕೆ 4711 ರಡಿಯಲ್ಲಿ ರೂ. 164.06 ಲಕ್ಷಗಳ ಅನುದಾನ ಒದಗಿಸಲಾಗಿರುತ್ತದೆ ಹಾಗೂ ಪ್ರಾಕೃತಿಕ ವಿಕೋಪ ನಿಧಿಯಡಿ ಉಡುಪಿ ಜಿಲ್ಲಾಧಿಕಾರಿಗಳಿಂದ ರೂ. 108.80 ಲಕ್ಷಗಳನ್ನು ಒದಗಿಸಲಾಗಿರುತ್ತದೆ.

ಆ) ಕಾಪು ವಿಧಾನಸಭಾ ಕ್ಷೇತ್ರ ವ್ಯಾಪ್ತಿಯಲ್ಲಿ ತೆಂಕ ಎರ್ಮಾಳ್, ಉದ್ಯಾವರ ಪಡುಕೆರೆ, ಬಡಾ ಎರ್ಮಾಳ್ ಹಾಗೂ ಉಚ್ಚಿಲ ಕರಾವಳಿ ತೀರ ಪ್ರದೇಶಗಳಿಗೆ 2009–10ನೇ ಸಾಲಿನ ಮಳೆಗಾಲದಲ್ಲಿ ಸಂಭವಿಸಿದ ಸಮುದ್ರ ಕೊರೆತವನ್ನು ತಡೆಯಲು ತುರ್ತು ಕಾಮಗಾರಿ ಕೈಗೊಳ್ಳುವುದಕ್ಕೋಸ್ಕರ ರೂ. 108.80 ಲಕ್ಷಗಳ ಮೊತ್ತದ ಕಾಮಗಾರಿಗೆ ಜಿಲ್ಲಾಧಿಕಾರಿಗಳು ಉಡುಪಿ ಜಿಲ್ಲೆ ಇವರು ಪ್ರಾಕೃತಿಕ ವಿಕೋಪ ನಿಧಿಯಡಿ ಮಂಜೂರಾತಿ ನೀಡಿ ಅನುದಾನ ಬಿಡುಗಡೆ ಮಾಡಿರುತ್ತಾರೆ.

2009–10ನೇ ಸಾಲಿನ ಆಯವ್ಯಯದಲ್ಲಿ ಒದಗಿಸಲಾದ ಒಟ್ಟು ಅನುದಾನದಲ್ಲಿ ರೂ. 75.00 ಲಕ್ಷಗಳನ್ನು ಕಾಪು ವಿಧಾನಸಭಾ ಕ್ಷೇತ್ರದ ಹಿಂದಿನ ವರ್ಷಗಳಲ್ಲಿ ನಿರ್ವಹಿಸಿದ ತುರ್ತು ಕಾಮಗಾರಿಗಳ ಬಾಕಿ ಬಿಲ್ಲುಗಳನ್ನು ಪಾವತಿಸಲು ಉಪಯೋಗಿಸಲಾಗಿದೆ.

ಇ) 2009–10ನೇ ಸಾಲಿನಲ್ಲಿ ಕೇಂದ್ರದಿಂದ ರಾಜ್ಯಕ್ಕೆ ಕಡಲ ಕೊರೆತದ ಸಲುವಾಗಿ ಯಾವುದೇ ಹಣ ಮಂಜೂರಾಗಿಲ್ಲ.

ರಸ್ತೆಗಳ ಅಭಿವೃದ್ಧಿ

1016 (1260) ಶ್ರೀ ಮಂಜುನಾಥ್ ಹೆಚ್.ಪಿ. (ಹುಣಸೂರು) : ಮಾನ್ಯ ಲೋಕೋಪಯೋಗಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಹುಣಸೂರು ತಾಲ್ಲೂಕಿನ ಲೋಕೋಪಯೋಗಿ ಇಲಾಖೆಗೆ ಸೇರಿದ ರಸ್ತೆ ಕಟ್ಟಡಗಳ ಅಭಿವೃದ್ಧಿ ಹಾಗೂ ನಿರ್ವಹಣೆಗಾಗಿ 2008–09 ಮತ್ತು 2009–10 ನೇ ಸಾಲಿನಲ್ಲಿ ಮಂಜೂರಾಗಿರುವ ಅನುದಾನವೆಷ್ಟು ಹಾಗೂ ಪ್ರಸ್ತುತ ಭೌತಿಕ ಮತ್ತು ಆರ್ಥಿಕ ಪ್ರಗತಿಯ ಬಗ್ಗೆ ಲೆಕ್ಕಶೀರ್ಷಿಕೆವಾರು ಮತ್ತು ಕಾಮಗಾರಿವಾರು ವಿವರ ನೀಡುವುದು;

ಆ) ಈ ಎರಡು ಸಾಲಿನಲ್ಲಿ ಕೈಗೆತ್ತಿಕೊಂಡ ರಸ್ತೆ ಕಾಮಗಾರಿಗಳ ಪೈಕಿ, ಕೆಲವು ರಸ್ತೆ ಕಾಮಗಾರಿಗಳು ಸ್ಥಗಿತಗೊಳ್ಳಲು ಕಾರಣವೇನು;

ಇ) ಸಂಬಂಧಪಟ್ಟ ಅಧಿಕಾರಿ ವರ್ಗದವರು ಮಂಜೂರಾದ ಹಣವನ್ನು ಸರ್ಕಾರದಿಂದ ಹಿಂತೆಗೆದುಕೊಳ್ಳಲಾಗಿದೆಯೆಂದು ತಿಳಿಸಿರುವುದಕ್ಕೆ ಕಾರಣವೇನು;

ಈ) ಈ ಎರಡು ಸಾಲುಗಳಲ್ಲಿ ಕೈಗೆತ್ತಿಕೊಂಡಿರುವ ರಸ್ತೆ ಕಾಮಗಾರಿಗಳು ತಾಲ್ಲೂಕಿನ ಬಹು ಮುಖ್ಯ ರಸ್ತೆಗಳಾಗಿದ್ದು, ಸ್ಥಗಿತದಿಂದ ಸಾರ್ವಜನಿಕರಿಗೆ ಬಹಳ ತೊಂದರೆಯಾಗಿರುವ ಕಾರಣ ಈ ಕಾಮಗಾರಿಗಳನ್ನು ಪುನರ್ ಪ್ರಾರಂಭಿಸಲಾಗುವುದೇ?

ಶ್ರೀ ಸಿ.ಎಂ. ಉದಾಸಿ (ಲೋಕೋಪಯೋಗಿ ಸಚಿವರು) :

ಅ) ಹುಣಸೂರು ತಾಲ್ಲೂಕಿನ ಲೊಕೋಪಯೋಗಿ ಇಲಾಖೆಗೆ ಸೇರಿದ ರಸ್ತೆ ಕಟ್ಟಡಗಳ ಅಭಿವೃದ್ಧಿಗಾಗಿ ಹಾಗೂ ನಿರ್ವಹಣೆಗಾಗಿ 2008–09 ಮತ್ತು 2009–10ನೇ ಸಾಲಿನಲ್ಲಿ ಮಂಜೂರಾಗಿರುವ ಅನುದಾನದ ಹಾಗೂ